# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೊಂದನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ:06ನೇ ಡಿಸೆಂಬರ್, 2023**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

**ಶ್ರೀ ಅರವಿಂದ ಕುಮಾರ್ ಅರಳಿ(ಸದಸ್ಯರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023-24ನೇ ಸಾಲಿನ ಮೊದಲನೇ ಹಾಗೂ ಮಧ್ಯಂತರ ವರದಿಯನ್ನೊಪ್ಪಿಸುವುದು.

## 03. ಗಮನ ಸೆಳೆಯುವ ಸೂಚನೆಗಳು

01. **ಡಾ: ತಳವಾರ್ ಸಾಬಣ್ಣ** ಅವರು ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿರುವ ಅನುದಾನದ ಅಪೂರ್ಣ ಬಳಕೆ ಮತ್ತು ಅವ್ಯವಹಾರಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

02. **ಶ್ರೀ ಮರಿತಿಬ್ಬೇಗೌಡ** ಅವರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಹಿರಿಯ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಹಾಗೂ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿನ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ರೂಪಿಸಿರುವ ನಿಯಮಗಳಲ್ಲಿನ ತಾರತಮ್ಯದ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

೦೩. **ಶ್ರೀಯುತರುಗಳಾದ ಗೋವಿಂದರಾಜು, ಕೆ.ಎ. ತಿಪ್ಪೇಸ್ವಾಮಿ ಹಾಗೂ ಸೂರಜ್ ರೇವಣ್ಣ** ಅವರುಗಳು ಪ್ರಾದೇಶಿಕ ಅಸಮತೋಲನವನ್ನು ನಿರ್ಮೂಲನೆ ಮಾಡುವ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದ ವಾರ್ಷಿಕ ನೋಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ಸ್ಥಾಪಿತವಾಗಿರುವ ವಿಶ್ವವಿದ್ಯಾಲಯಗಳಲ್ಲಿನ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಅರಣ್ಯ ಒತ್ತುವರಿ ಪ್ರಕರಣಗಳಿಗೆ ಅರಣ್ಯ ಹಾಗೂ ಕಂದಾಯ ಇಲಾಖೆಗಳು ಜಂಟಿ ಸರ್ವೆ ಮಾಡಿ ಪರಿಹಾರ ಸಿಗದಿರುವ ಕಾರಣ ಒತ್ತುವರಿದಾರರಿಗೆ ತೊಂದರೆಯಾಗಿರುವ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಉತ್ತರ ಕರ್ನಾಟಕದಲ್ಲಿರುವ ನದಿಗಳ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನದಿಗಳ ಜೋಡಣೆ ಮುಖಾಂತರ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್ ರಾಜ್ ಕಾಯಿದೆ 1993ರಂತೆ ತ್ರಿಸ್ಥರ ಪಂಚಾಯತ್‌ಗಳಾದ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಕಾರ್ಯಕ್ರಮಗಳು, ಆಡಳಿತ ಮಾನವ ಸಂಪನ್ಮೂಲಗಳು ಮತ್ತು ಅನುದಾನಗಳನ್ನು ವರ್ಗಾವಣೆ ಮಾಡಿ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವ ಕುರಿತು ಪ್ರಸ್ತಾಪಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**ಶ್ರೀಯುತರುಗಳಾದ:-**

| | |
|---|---|
| ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ | ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**